ದಿ: ೧೧.೦೯.೨೦೨೩ ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಿ ಮುಂದುವರೆದ ಪಾಟೀ ಸವಾಲಿಗೆ ಒಳಪಡಿಸಲಾಯಿತು.

**ಮುಂದುವರೆದ ಪಾಟೀ ಸವಾಲು**: ೬ನೇ ಪ್ರತಿವಾದಿ ಪರ ಶ್ರೀ ಎನ್.ಜಿ.ಜಿ. ವಕೀಲರಿಂದ,

ನಮ್ಮ ತಂದೆ ಅಥವಾ ನಮ್ಮ ತಾಯಿ ಹೆಸರಿಗೆ ದಾವಾ ಆಸ್ತಿ ಇರುವ ಕುರಿತು ಏನು ದಾಖಲೆ ಇದೆ ಎಂದು ನನಗೆ ಗೊತ್ತಿಲ್ಲ. ನನ್ನ ತಂದೆ ತಾಯಿ ದಾವಾ ಆಸ್ತಿಯಲ್ಲಿ ಸ್ವಾಧೀನದಲ್ಲಿರುವ ಕುರಿತು ದಾಖಲೆಗಳು ನಮ್ಮ ಅಣ್ಣನಿಗೆ ಗೊತ್ತು. ದಾವಾ ಆಸ್ತಿ ನಮ್ಮ ತಾತ ಮತ್ತು ಅಜ್ಜಿಯ ಹೆಸರಿಗೆ ಇರುವ ದಾಖಲೆಯ ಕುರಿತು ನನಗೆ ಗೊತ್ತಿಲ್ಲ. ಆ ದಾವಾ ಆಸ್ತಿಗಳು ನಮ್ಮ ಪಿತ್ರಾರ್ಜಿತ ಆಸ್ತಿಗಳು ಅಲ್ಲ, ೬ನೇ ಪ್ರತಿವಾದಿಯ ಸ್ವಯಾರ್ಜಿತ ಆಸ್ತಿಗಳು ಎಂದರೆ ಸರಿಯಲ್ಲ. ೬ನೇ ಪ್ರತಿವಾದಿ ದಾವಾ ಆಸ್ತಿಯ ದಾಖಲೆಗಳನ್ನು ತನ್ನ ಹೆಸರಿಗೆ ಮಾಡಿಕೊಂಡಿರುವ ಕುರಿತು ನಾನು ಯಾವುದೇ ಅಪೀಲು ಸಲ್ಲಿಸಿಲ್ಲ.

ದಾವಾ ಆಸ್ತಿಗೆ ಸಂಬಂಧಿಸಿದಂತೆ ನಾನು ಕೂಡ ಜಂಟಿ ಸ್ವಾಧಿನದಲ್ಲಿರುವುದಾಗಿ ಮತ್ತು ಒಟ್ಟು ಕುಟುಂಬದ ಸದಸ್ಯಳಿರುವುದಾಗಿ ಖಾತೆ ಮಾಡಿಕೊಳ್ಳಲು ಯಾವುದೇ ಅರ್ಜಿ ಸಲ್ಲಿಸಿಲ್ಲ. ೬ನೇ ಪ್ರತಿವಾದಿ ಹೆಸರಿಗೆ ದಾಖಲಾತಿಗಳನ್ನು ಮಾಡಿಕೊಳ್ಳುವ ಸಂದರ್ಭದಲ್ಲಿ ನಾನು ತಕರಾರು ಸಲ್ಲಿಸಿಲ್ಲ ಎಂದರೆ ಸರಿ. ದಾವಾ ಆಸ್ತಿಗಳು ೬ನೇ ಪ್ರತಿವಾದಿಯ ಸ್ವಯಾರ್ಜಿತ ಆಸ್ತಿಗಳಾಗಿದ್ದರಿಂದ ನಾನು ತಕರಾರು ಸಲ್ಲಿಸಿಲ್ಲ ಎಂದರೆ ಸರಿಯಲ್ಲ. ಸರ್ವೆ ನಂ.೩೦/೨ ಆಸ್ತಿಯನ್ನು ೬ನೇ ಪ್ರತಿವಾದಿ ಮಾರಾಟ ಮಾಡಿರುವ ಕುರಿತು ನನಗೆ ಗೊತ್ತಿಲ್ಲ. ಸದರಿ ಆಸ್ತಿ ೬ನೇ ಪ್ರತಿವಾದಿಯ ಸ್ವಯಾರ್ಜಿತ ಆಸ್ತಿ ಎಂದರೆ ಸರಿಯಲ್ಲ.

ಸರ್ವೆ ನಂ.೧೩೩/೩ ಇದು ೬ನೇ ಪ್ರತಿವಾದಿ ಕ್ರಯಕ್ಕೆ ಪಡೆದಿದ್ದಾರೆ ಎಂದರೆ ತನಗೆ ಗೊತ್ತಿಲ್ಲ. ಸರ್ವೆ ನಂ.೧೩೩/೩ ರಲ್ಲಿ ರಾಷ್ಟ್ರೀಯ ಹೆದ್ದಾರಿಯ ಪ್ರಾಧೀಕಾರದವರು ಮೂರುಕಾಲು ಗುಂಟೆ ಜಮೀನ್ನನ್ನು ಸ್ವಾಧೀನ ಪಡಿಸಿಕೊಂಡಿದ್ದು, ಅದರ ಪರಿಹಾರವನ್ನು ೬ನೇ ಪ್ರತಿವಾದಿ ತೆಗೆದುಕೊಂಡಿದ್ದಾರೆ ಎಂದರೆ ಸರಿ. ೬ನೇ ಪ್ರತಿವಾದಿ ಪರಿಹಾರ ಪಡೆದುಕೊಳ್ಳುವಾಗ ನೀವು ತಕರಾರು ಸಲ್ಲಿಸಿಲ್ಲ ಎಂದರೆ ಸಾಕ್ಷಿಯು ತನಗೆ ಗೊತ್ತಿಲ್ಲ ಎನ್ನುತ್ತಾರೆ. ರಾಷ್ಟ್ರೀಯ ಹೆದ್ದಾರಿಯ ಪ್ರಾಧೀಕಾರದವರು ಸ್ವಾಧೀನಪಡಿಸಿಕೊಳ್ಳುವಾಗ ನೀವು ತಕರಾರು ಸಲ್ಲಿಸಿಲ್ಲ ಎಂದರೆ ಸಾಕ್ಷಿಯು ತನಗೆ ಗೊತ್ತಿಲ್ಲ ಎನ್ನುತ್ತಾರೆ. ದಾವಾ ಆಸ್ತಿಯು ೬ನೇ ಪ್ರತಿವಾದಿಯ ಸ್ವಯಾರ್ಜಿತ ಆಸ್ತಿ ಆಗಿದ್ದರು, ಈಗ ನಾನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ಮತ್ತು ಇನ್ನಿತರ ಪ್ರತಿವಾದಿಗಳ ಹೆಸರು ದಾವಾ ಆಸ್ತಿಯ ಪಹಣಿ , ಮ್ಯುಟೇಷನ್ ನಲ್ಲಿ ಇಲ್ಲ ಎಂದರೆ ಸರಿ. ನಾನು ದಾವಾ ಆಸ್ತಿಗಳ ಸ್ವಾಧೀನದಲ್ಲಿ ಇಲ್ಲ ಎಂದರೆ ಸರಿ.

ಸರ್ವೆ ನಂ.೧೬೫ ಆಸ್ತಿಯು ೬ನೇ ಪ್ರತಿವಾದಿಯ ಸ್ವಯಾರ್ಜಿತ ಆಸ್ತಿ ಎಂದರೆ ಸರಿಯಲ್ಲ. ದೊಡ್ಡಚೆನ್ನಪ್ಪ ಇವರು ನಮ್ಮ ದೊಡ್ಡಪ್ಪನ ಮಗ. ದೊಡ್ಡಚೆನ್ನಪ್ಪ ಇವರು ೬ನೇ ಪ್ರತಿವಾದಿಗೆ ಆಸ್ತಿಯನ್ನು ಕೊಟ್ಟಿದ್ದಾರೆ ಎಂದರೆ ಸರಿಯಲ್ಲ. ದಾವಾ ಮನೆ ಸ್ವತ್ತು ನನ್ನ ತಾತ ಅಥವಾ ಅಜ್ಜಿಯ ಹೆಸರಿನಲ್ಲಿರುವ ಕುರಿತು ದಾಖಲೆಗಳನ್ನು ಹಾಜರುಪಡಿಸಿಲ್ಲ ಎಂದರೆ ಸರಿ. ಮನೆ ಆಸ್ತಿಯು ನಮ್ಮ ಅತ್ತಿಗೆಯ ಸ್ವಯಾರ್ಜಿತ ಆಸ್ತಿ ಎಂದರೆ ಸರಿಯಲ್ಲ. ಸದರಿ ಮನೆಯನ್ನು ಹೊರತುಪಡಿಸಿ ೬ನೇ ಪ್ರತಿವಾದಿಗೆ ಬೇರೆ ಮನೆ ಇಲ್ಲ ಎಂದರೆ ಸರಿ.

ದಾವಾ ಆಸ್ತಿಯಲ್ಲಿ ನನಗೆ ಯಾವುದೇ ಹಕ್ಕು, ಹಿತಾಸಕ್ತಿ, ಸ್ವಾಧೀನ ಇಲ್ಲದಿದ್ದರು, ಸುಳ್ಳು ದಾವೆ ಸಲ್ಲಿಸಿ, ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದ ಮೇಲೆ ಗಣಕೀಕರಿಸಿದೆ)

**ಓ.ಹೇ.ಕೇ.ಸ.ಇದೆ**

**ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ**
**ಹೊಸಕೋಟೆ.**